KARNATAKA LEGISLATIVE ASSEMBLY
PAPER CLIPPING
DEPARTMENT / SUBJECT:
NAME OF THE NEWSPAPER: ಉದಯವಾಣಿ
DATE: 21/11/2019

# ಸಾರ್ವತ್ರಿಕ, ಪರಿಮಿತ ರಜೆ ಘೋಷಣೆಗೆ ನಿರ್ಧಾರ

**ಬೆಂಗಳೂರು:** 2020ನೇ ಕ್ಯಾಲೆಂಡರ್ ವರ್ಷಕ್ಕೆ ಸಾರ್ವತ್ರಿಕ ರಜೆ ಹಾಗೂ ಪರಿಮಿತ (ನಿರ್ಬಂಧಿತ) ರಜೆಗಳನ್ನು ಘೋಷಿಸುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದ್ದು ಒಪ್ಪಿಗೆ ನೀಡಲಾಗಿದೆ ಎಂದು ಹೇಳಲಾಗಿದೆ.

ವಿಧಾನಸೌಧದಲ್ಲಿ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಚರ್ಚೆಯಾಗಿದೆ. ಸರ್ಕಾರಿ ನೌಕರರಿಗೆ ಹೋಲಿಸಿದರೆ ಪೊಲೀಸ್ ಇಲಾಖೆ ಸೇರಿದಂತೆ ಆಯ್ದ ಇಲಾಖೆ ನೌಕರರಿಗೆ ರಜೆಗಳು ಕಡಿಮೆ ಇವೆ. ಹಾಗಾಗಿ, ಪೊಲೀಸ್ ಇಲಾಖೆ ಸೇರಿದಂತೆ ಆಯ್ದ ಇಲಾಖೆಗಳಲ್ಲಿ ಸಾಧ್ಯವಿರುವಷ್ಟು ಪರಿಮಿತ ರಜೆ ನೀಡುವ ಬಗ್ಗೆ ಸಚಿವ ಸಂಪುಟ ನಿರ್ಧರಿಸಿದೆ. ಹಾಗೆಯೇ ರಜೆರಹಿತ ಜಯಂತಿ ಆಚರಣೆ ಬಗ್ಗೆಯೂ ಚರ್ಚೆಯಾಯಿತು. ಈ ಸಂಬಂಧ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಧ್ಯಾಸಾಧ್ಯತೆ ವರದಿ ಪಡೆದು ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸಲು ತೀರ್ಮಾನಿಸಲಾಯಿತು ಎನ್ನಲಾಗಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ/ ಇಂದಿರಾಗಾಂಧಿ ವಸತಿ ಶಾಲೆಗಳ ಎಂಟು ಸಂಕೀರ್ಣ ಕಟ್ಟಡಗಳನ್ನು 215 ಕೋಟಿ ರೂ.ಅಂದಾಜು ವೆಚ್ಚದಲ್ಲಿ ನಿರ್ಮಿಸುವ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎನ್ನಲಾಗಿದೆ.

ಬೆಂಗಳೂರಿನ ಸಂಜಯ್‌ಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆಯಲ್ಲಿ ಕ್ರೀಡಾ ರೋಗಿಗಳ ವಿಭಾಗ ಹಾಗೂ ರೋಬೋಟಿಕ್ಸ್ ಶಸ್ತ್ರ ಚಿಕಿತ್ಸಾ ಸೌಲಭ್ಯವನ್ನು 39.30 ಕೋಟಿ ರೂ.ಅಂದಾಜು ವೆಚ್ಚದಲ್ಲಿ ಸ್ಥಾಪಿಸುವ ಯೋಜನೆಗೆ ಆಡಳಿತಾತ್ಮಕ ಒಪ್ಪಿಗೆ ಕೊಡಲಾಗಿದೆ ಎಂದು ತಿಳಿದು ಬಂದಿದೆ.

## ಕೆಪಿಎಸ್‌ಸಿ ಸಂದರ್ಶನ 1:3 ಅನುಪಾತಕ್ಕೆ ಸಂಪುಟ ಒಪ್ಪಿಗೆ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ನೇಮಕಾತಿ ಸಂದರ್ಶನಕ್ಕೆ ಒಂದು ಹುದ್ದೆಗೆ ಆಹ್ವಾನಿಸುವ ಅಭ್ಯರ್ಥಿಗಳ ಸಂಖ್ಯೆಯನ್ನು 1:3 ಅನುಪಾತದಡಿ ನಡೆಸುವ ವ್ಯವಸ್ಥೆಯನ್ನು ಮತ್ತೆ ಜಾರಿಗೊಳಿಗೊಳಿಸಲು ಸರ್ಕಾರ ತೀರ್ಮಾನಿಸಿದೆ.

ಈ ಸಂಬಂಧ ಕರ್ನಾಟಕ ಗೆಜೆಟೆಡ್ ಪ್ರೊಬೆಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಕ್ಕೆ ವಿಧಾನಸೌಧದಲ್ಲಿ ಬುಧವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ ಎಂದು ಉನ್ನತ ಮೂಲಗಳು ಹೇಳಿವೆ.

ಈ ಹಿಂದೆ ಅಂದರೆ 2014ರಲ್ಲಿ ಪಿ.ಸಿ.ಹೋಟಾ ಸಮಿತಿ ಶಿಫಾರಸಿನಂತೆ ವ್ಯಕ್ತಿತ್ವ ಪರೀಕ್ಷೆಗೆ 1:3ರ ಅನುಪಾತ ಅಳವಡಿಸಿಕೊಳ್ಳಲಾಗಿತ್ತು. ಆದರೆ 2016ರಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಈ ನಿಯಮಕ್ಕೆ ತಿದ್ದುಪಡಿ ತಂದು 1:5ರ ಅನುಪಾತಕ್ಕೆ ಹೆಚ್ಚಿಸಲು ನಿರ್ಧರಿಸಿತ್ತು.

ಈ ನಡುವೆ ಕೇಂದ್ರ ಲೋಕಸೇವಾ ಆಯೋಗವು ವ್ಯಕ್ತಿತ್ವ ಪರೀಕ್ಷೆಗೆ 1:3ರ ಅನುಪಾತ ಅಳವಡಿಸಿಕೊಂಡಿದೆ. ಜತೆಗೆ ಹೋಟಾ ಸಮಿತಿಯು ಇದೇ ಅನುಪಾತ ಅನುಸರಿಸುವಂತೆ ಶಿಫಾರಸು ಮಾಡಿತ್ತು. ಸಂದರ್ಶನಕ್ಕೆಂದು 1:5ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಆಹ್ವಾನಿಸುವ ವ್ಯವಸ್ಥೆಯಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಲು ಹಲವು ತಿಂಗಳುಗಳೇ ಬೇಕಾಗುತ್ತದೆ. ಹಾಗಾಗಿ ಇತರೆ ನೇಮಕಾತಿ ಪ್ರಕ್ರಿಯೆ ನಡೆಸಲು ಸಾಧ್ಯವಾಗುವುದಿಲ್ಲ ಎಂದೂ ಆಯೋಗ ಸರ್ಕಾರಕ್ಕೆ ತಿಳಿಸಿತ್ತು. ಆ ಹಿನ್ನೆಲೆಯಲ್ಲಿ ಬದಲಾವಣೆ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ.